ಆಯುಕ್ತರು (ಆಡಳಿತ) ರವರ ಆಪ್ತ ಕಾರ್ಯ
ನಂ: ಅ.ಆ(ಆ)/PR 555/2021-22
ದಿನಾಂಕ 24/05/2021

ಕರ್ನಾಟಕ ಸರ್ಕಾರದ ನಡವಳಿಗಳು

ಬಿ. ಬಿ. ಎಂ. ಪಿ. ಮುಖ್ಯ ಆಯುಕ್ತರವರ ಆಪ್ತ ಕಾರ್ಯಾಲಯ
ಸಂಖ್ಯೆ ಪಿ. ಎಸ್. ಆರ್. (1) 948
ದಿನಾಂಕ 17/5/2021

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್ಎಫ್ಸಿ 2016, ದಿನಾಂಕ: 04-03-2016ರ ವಿಶೇಷ ಅಭಿವೃದ್ಧಿ ಕಾಮಗಾರಿಗಳು (ಏಳು ಸಿಎಂಸಿ ಮತ್ತು ಒಂದು ಟಿಎಂಸಿ) ಯೋಜನೆಯಡಿ ಕೈಗೊಳ್ಳಲು ಉದ್ದೇಶಿಸಿರುವ "Improvements to Widened portion of road construction of new Drains UG cable duct and footpath at Doddabommasandra main road and surrounding roads in ward No.01 Doddabommasandra Vidyaranyapura sub division" ಕಾಮಗಾರಿಯ ಅಂದಾಜು ಮೊತ್ತ ರೂ.2.75 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್ಎಫ್ಸಿ 2016, ದಿನಾಂಕ: 04-03-2016.
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಪಿಆರ್ (ಜಿ)/4664/2020-21, ದಿನಾಂಕ: 04-12-2020.
3. ದಿನಾಂಕ: 06-03-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

CHIEF COMMISSIONER
BRUHAT BENGALURU MAHANAGAR PALIKE

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 04-03-2016ರ ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್ಎಫ್ಸಿ 2016, ರಲ್ಲಿ 2015-16ನೇ ಸಾಲಿನ ಆಯವ್ಯಯದ ಸರ್ಕಾರದ ಅನುದಾನದ ಕಾಮಗಾರಿಗಳು ಲೆಕ್ಕ ಶೀರ್ಷಿಕೆ ಪಿ-3089ರಡಿ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ ಏಳು ಸಿಎಂಸಿ ಮತ್ತು ಒಂದು ಟಿಎಂಸಿ ಯೋಜನೆಯಡಿಯಲ್ಲಿ ಒದಗಿಸಿರುವ ರೂ.250.00 ಕೋಟಿಗಳ ಪೈಕಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ಮೀಸಲಿಟ್ಟ ರೂ.175.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಬಂಧದ ಕ್ರಮ ಸಂಖ್ಯೆ: 49 ರಲ್ಲಿ ಅನುಮೋದನೆ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 04-12-2020ರ ಪತ್ರದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್ಎಫ್ಸಿ 2016, ದಿನಾಂಕ: 04-03-2016ರ ಕ್ರಿಯಾ ಯೋಜನೆಯ ಅನುಬಂಧದ ಕ್ರಮ ಸಂಖ್ಯೆ: 49ರ ಕಾಮಗಾರಿಗಳನ್ನು ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಳ್ಳಲು ಅನುಮೋದನೆ ನೀಡಿರುವಂತೆ "Improvements to Widened portion of road construction of new Drains UG cable duct and footpath at Doddabommasandra main road and surrounding roads in ward No.01 Doddabommasandra Vidyaranyapura sub division" ಯೋಜನೆಯ ಮೊತ್ತ ರೂ.275.00 ಲಕ್ಷಗಳಿಗೆ ಜಾಬ್ ಸಂಖ್ಯೆಯನ್ನು ಪಡೆಯಲಾಗಿರುತ್ತದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

. . .2.

ಅಪರ ಆಯುಕ್ತರ ಕಛೇರಿ
ಯೋಜನಾ ವಲಯ, ಬಿಬಿಎಂಪಿ
ದಿನಾಂಕ 21/5/2021

ಸರ್ಕಾರದ ದಿನಾಂಕ: 04-03-2016ರ ಕ್ರಿಯಾ ಯೋಜನೆಯ ಅನುಬಂಧದ ಕ್ರಮ ಸಂಖ್ಯೆ: 49ರಲ್ಲಿ ಯಲಹಂಕ ವಲಯ ಯೋಜನಾ ವಿಭಾಗ ಕಚೇರಿಯಿಂದ ಟೆಂಡರ್ ಸಂಖ್ಯೆ: BBMP/YNK/EE(Project)/ TEND/11/2020-21, ದಿನಾಂಕ: 12-08-2019 ರಂತೆ ದ್ವಿಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ರೂ.230.33 ಲಕ್ಷಗಳಿಗೆ (ಟೆಂಡರ್‌ಗಿಟ್ಟ ಮೊತ್ತ) ಕ್ಕೆ ಟೆಂಡರ್ ಆಹ್ವಾನಿಸಲಾಗಿರುತ್ತದೆ. ಸದರಿ ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ದಿನಾಂಕ: 31-08-2020 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಗುತ್ತಿಗೆದಾರರಾದ (1) Sri. G HUMESH KUMAR (SRI SAI CONSTRUCTIONS) ಮತ್ತು (2) SRI. GOPIKRISHNA APSANI (NIDHI CONSTRUCTIONS) ರವರು ಭಾಗವಹಿಸಿದ್ದು, ಸದರಿ ಇಬ್ಬರೂ ಗುತ್ತಿಗೆದಾರರು ತಾಂತ್ರಿಕವಾಗಿ ಅರ್ಹರಾಗಿದ್ದು, ದಿನಾಂಕ: 17-11-2020 ರಂದು ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ತಾಂತ್ರಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ತಾಂತ್ರಿಕ ಬಿಡ್‌ಗೆ ಅನುಮೋದನೆ ನೀಡಿ ಆರ್ಥಿಕ ಬಿಡ್‌ನ್ನು ತೆರೆಯಲು ಅನುಮೋದನೆ ನೀಡಿರುವಂತೆ ದಿನಾಂಕ: 21-11-2020 ರಂದು ಆರ್ಥಿಕ ಬಿಡ್‌ನ್ನು ತೆರೆಯಲಾಗಿರುತ್ತದೆ. ವಿವರ ಕೆಳಕಂಡಂತಿರುತ್ತದೆ ಎಂದು ಬಿಬಿಎಂಪಿ ಆಯುಕ್ತರು ತಿಳಿಸಿರುತ್ತಾರೆ.

ಕ್ರಮ ಸಂಖ್ಯೆ	ತಾಂತ್ರಿ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ ರೂ. (ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ರೂ. (ಲಕ್ಷಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ.ಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ದರಗಳಿಗೆ ಹೋಲಿಸಿದಾಗ
1	SRI. GOPIKRISHNA APSANI (NIDHI CONSTRUCTIONS)	275.00	230.33	2,41,96,597.99	(+) 5.05%
2	Sri. G HUMESH KUMAR (SRI SAI CONSTRUCTIONS)			2,46,81,532.56	(+)7.15%

ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿರುವ ಎಲ್-1 ಗುತ್ತಿಗೆದಾರರಾದ SRI. GOPIKRISHNA APSANI (NIDHI CONSTRUCTIONS) ರವರು ಸಲ್ಲಿಸಿದ್ದ ರೂ.2,41,96,597.99 ಗಳ ದರವು ಮಂಜೂರಾತಿ ದರಗಳ ಮೇಲೆ ಶೇ.5.05% ಹೆಚ್ಚುವರಿಯಾಗಿದ್ದು, ಮುಖ್ಯ ಅಭಿಯಂತರರು, ಯಲಹಂಕ ವಲಯ ರವರು ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿ ದರ ಸಂಧಾನದ ನಂತರ ರೂ.2,41,84,499.69 ಗಳಾಗಿದ್ದು, ಮಂಜೂರಾತಿ ದರಗಳ ಮೇಲೆ (2018-19ನೇ ಸಾಲಿನ) ಶೇ.4.99 ರಷ್ಟು ಹೆಚ್ಚುವರಿಯಾಗಿರುತ್ತದೆ. ದಿನಾಂಕ: 04-12-2020 ರಂದು ನಡೆದ ಆರ್ಥಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ಶೇ.4.99 ರಷ್ಟು ಹೆಚ್ಚುವರಿ ಟೆಂಡರ್‌ಗೆ ಮಂಜೂರಾತಿ ನೀಡಲು ಸಮಿತಿಯಲ್ಲಿ ಶಿಫಾರಸ್ಸು ಮಾಡಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಕಾಮಗಾರಿಯ ಅಂದಾಜು ಮೊತ್ತ ರೂ.275.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಡಿಮೆ ಮೊತ್ತದ ಟೆಂಡರ್‌ದಾರರಾದ SRI. GOPIKRISHNA APSANI (NIDHI CONSTRUCTIONS) ರವರ ಸಂಧಾನಿತ ಟೆಂಡರ್‌ನ ಮೊತ್ತ ರೂ.2,41,84,499.69 ಶೇ.4.99 ರಷ್ಟು ಹೆಚ್ಚುವರಿ ದರಗಳಿಗೆ ಮಂಜೂರಾತಿಯನ್ನು ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ ಸದರಿ ಪ್ರಸ್ತಾವನೆಯನ್ನು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 06-03-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

. . .3.

"ವಿವರವಾದ ಚರ್ಚೆಯ ನಂತರ "Improvements to Widened portion of road construction of new Drains UG cable duct and footpath at Doddabommasandra main road and surrounding roads in ward No.01 Doddabommasandra Vidyaranyapura sub division" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, SRI. GOPIKRISHNA APSANI (NIDHI CONSTRUCTIONS) ರವರ ಸಂಧಾನಿತ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ. 2,30,33,967,95 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ. 2,32,64,307.63 ಗಳಿಗೆ ಮಿತಿಗೊಳಿಸಿ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು"

ಸರ್ಕಾರಿ ಆದೇಶ ಸಂಖ್ಯೆ: ನಅಇ 277 ಎಂಎಸ್‌ವೈ 2020,
ಬೆಂಗಳೂರು, ದಿನಾಂಕ: 12–05–2021.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್‌ಎಫ್‌ಸಿ 2016ರ ಕ್ರಿಯಾ ಯೋಜನೆ ಅನುಬಂಧದ ಕ್ರಮ ಸಂಖ್ಯೆ: 49 ರಲ್ಲಿನ ಕಾಮಗಾರಿಗಳಾದ "Improvements to Widened portion of road construction of new Drains UG cable duct and footpath at Doddabommasandra main road and surrounding roads in ward No.01 Doddabommasandra Vidyaranyapura sub division" ಪ್ಯಾಕೇಜಿನ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 06–03–2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ SRI. GOPIKRISHNA APSANI (NIDHI CONSTRUCTIONS) ರವರ ಸಂಧಾನಿತ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ. 2,32,64,307.63 (ಎರಡು ಕೋಟಿ ಮೂವತ್ತೇರಡು ಲಕ್ಷದ ಅರವತ್ತಾನ್ಕಾಲು ಸಾವಿರದ ಮೂನ್ನೂರ ಏಳು ರೂಪಾಯಿ ಮತ್ತು ಅರವತ್ತ ಮೂರು ಪೈಸೆಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಂಎಫ್‌ಸಿ 2016, ದಿನಾಂಕ: 04–03–2016ರ "2015–16ನೇ ಸಾಲಿನ ವಿಶೇಷ ಅಭಿವೃದ್ಧಿ" (ಏಳು ಸಿಎಂಸಿ ಮತ್ತು ಒಂದು ಟಿಎಂಸಿ) ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
5. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆ ಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
6. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.

. . .4.

8. ದಿನಾಂಕ: 06-03-2021ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀ ಸಾಗರ್ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.